ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಬಿಟಿಇ/11/ಇಸಿಎಸ್(2)/2016

ಕಾರ್ಯದರ್ಶಿಯವರ ಕಛೇರಿ,
ತಾಂತ್ರಿಕ ಪರೀಕ್ಷಾ ಮಂಡಳಿ,
ಅರಮನೆ ರಸ್ತೆ, ಬೆಂಗಳೂರು – 1
ದಿನಾಂಕ: 03-03-2017

## ಸುತ್ತೋಲೆ

ವಿಷಯ: 2016 ರ ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಥಿಯರಿ ಪರೀಕ್ಷೆಯ ಮರುಮೌಲ್ಯಮಾಪನ ಫಲಿತಾಂಶ ಪ್ರಕಟಿಸಿರುವ ಬಗ್ಗೆ.
ಉಲ್ಲೇಖ: ಈ ಕಛೇರಿ ಸುತ್ತೋಲೆ ಸಂಖ್ಯೆ: ಬಿಟಿಇ/11/ಇಸಿಎಸ್(2)/2016 ದಿ:25-01-2017

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2016ರ ನವೆಂಬರ್/ಡಿಸೆಂಬರ್ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನದ ಫಲಿತಾಂಶವನ್ನು ದಿನಾಂಕ:03-03-2017 ರಂದು ಬಿಟಿಇ ಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲಾಗಿದೆ. ಪ್ರಯುಕ್ತ ಈ ವಿಷಯವನ್ನು ಎಲ್ಲಾ ವಿದ್ಯಾರ್ಥಿಗಳು/ಉಪನ್ಯಾಸಕರು/ಪೋಷಕರ ಗಮನಕ್ಕೆ ತರಲು ಸಂಬಂಧಿಸಿದ ಸಂಸ್ಥೆಗಳ ಪ್ರಾಚಾರ್ಯರುಗಳಿಗೆ ಸೂಚಿಸಲಾಗಿದೆ.

ಮರುಮೌಲ್ಯಮಾಪನ ಫಲಿತಾಂಶವು www.btekarlinx.net / www.bteservers1.net ವೆಬ್‌ಪೋರ್ಟಲ್‌ನಲ್ಲಿಯೂ ಸಹ ಲಭ್ಯವಿರುತ್ತದೆ.

ಮುಂದುವರೆದು ಉಲ್ಲೇಖಿತ ಸುತ್ತೋಲೆಯಲ್ಲಿ ಮರುಮೌಲ್ಯಮಾಪನ /ಫೋಟೊ ಪ್ರತಿಗಾಗಿ ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳ ವಿವರಗಳನ್ನು ಬಿಟಿಇಲಿಂಕ್ಸ್ ಪೋರ್ಟಲ್‌ನಲ್ಲಿ ಅಪ್‌ಡೇಟ್ ಮಾಡಿರುವ ಕುರಿತು ಖಾತ್ರಿಪಡಿಸಿಕೊಳ್ಳಲು ಸೂಚಿಸಿದ್ದಾಗ್ಯೂ ಕೂಡ, ಕೆಲವೊಂದು ಸಂಸ್ಥೆಗಳ ಪ್ರಾಚಾರ್ಯರುಗಳು ಅಪ್‌ಡೇಟ್ ಮಾಡುವಲ್ಲಿ ಲೋಪವೆಸಗಿರುವುದು ಕಂಡುಬಂದಿರುತ್ತದೆ.

ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ದಿನಾಂಕ:28-01-2017ರೊಳಗೆ ನಿಗದಿತ ಶುಲ್ಕ ಪಾವತಿಸಿದ್ದು, ಫಲಿತಾಂಶ ಪ್ರಕಟಗೊಳ್ಳದ/ ಫೋಟೊಪ್ರತಿ ತಲುಪಿಲ್ಲದ ವಿದ್ಯಾರ್ಥಿಗಳ ವಿವರಗಳನ್ನು ದಿನಾಂಕ:08-03-2017ರ ಸಂಜೆ 5-00 ಗಂಟೆಯೊಳಗೆ ಬಿಟಿಇಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್‌ನಲ್ಲಿ ಅಪ್‌ಡೇಟ್ ಮಾಡಿ ಸದರಿ ವಿದ್ಯಾರ್ಥಿಗಳ ಪಟ್ಟಿಯನ್ನು Acknowledgment slip ಲಗತ್ತಿಸಿ ಮಂಡಳಿಗೆ ಖುದ್ದಾಗಿ ಸಲ್ಲಿಸಲು ಸೂಚಿಸಲಾಗಿದೆ. ನಂತರದ ದಿನಗಳಲ್ಲಿ ಅಂತಹ ವಿದ್ಯಾರ್ಥಿಗಳ ಮರುಮೌಲ್ಯಮಾಪನ ಫಲಿತಾಂಶ/ಫೋಟೊ ಪ್ರತಿ ನೀಡಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ,

ರಾಜ್ಯದಲ್ಲಿನ ಎಲ್ಲಾ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರುಗಳಿಗೆ – ಮಾಹಿತಿ ಮತ್ತು ಮುಂದಿನ ಅಗತ್ಯ ಕ್ರಮಕ್ಕಾಗಿ

ಪ್ರತಿ: 1) ಇ-ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
2) ಕಂಪ್ಯೂಟರ್ ವಿಭಾಗ – ಬಿಟಿಇಲಿಂಕ್ಸ್ ವೆಬ್‌ಪೋರ್ಟಲ್‌ನಲ್ಲಿ ಪ್ರಕಟಿಸಲು
3) ಕಾರ್ಯದರ್ಶಿಯವರ ಆಪ್ತ ಶಾಖೆ